RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-I<br>Part-I | ಬೆಂಗಳೂರು, ಶುಕ್ರವಾರ, ಜನವರಿ ೫, ೨೦೧೮ (ಪುಷ್ಯ ೧೫, ಶಕ ವರ್ಷ ೧೯೩೯)<br>Bengaluru, Friday, January 5, 2018 (Pushya 15, Shaka Varsha 1939) | ನಂ. ೩೩<br>No. 33 |
|---|---|---|

ಕರ್ನಾಟಕ ಸರ್ಕಾರದ ನಡವಳಿಗಳು

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

**ವಿಷಯ** : ರಾಜ್ಯ ನಾಗರಿಕ ಸೇವಾ ಹುದ್ದೆಗಳ ನೇಮಕಾತಿ ಪದ್ಧತಿಯನ್ನು ನಿರ್ಧರಿಸುವ ಹಾಗೂ ಅಂಗವಿಕಲರಿಗೆ ಬಡ್ತಿಯಲ್ಲಿ ಮೀಸಲಾತಿ ಸೌಲಭ್ಯ ಕಲ್ಪಿಸುವ ಬಗ್ಗೆ ಪರಿಶೀಲಿಸಲು ನಿವೃತ್ತ ಕಾರ್ಯದರ್ಶಿಯವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸುವ ಬಗ್ಗೆ

**ಪ್ರಸ್ತಾವನೆ :**

ನ್ಯಾಷನಲ್ ಫೆಡರೇಷನ್ ಆಫ್ ದಿ ಬ್ಲೈಂಡ್ ಸಂಸ್ಥೆಯು ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮ 1995ರಡಿ ರಾಜ್ಯ ನಾಗರಿಕ ಸೇವಾ ಹುದ್ದೆಗಳ ನೇರ ನೇಮಕಾತಿಯಲ್ಲಿ ಕೇಂದ್ರ ಸರ್ಕಾರ ಮತ್ತು ಇತರ ಕೆಲವು ರಾಜ್ಯ ಸರ್ಕಾರಗಳು ಅನುಸರಿಸಿದಂತೆ ಸಮತಳದ ಮೀಸಲಾತಿಯನ್ನು ಜಾರಿಗೊಳಿಸಲು ಮತ್ತು ಅಂಗವಿಕಲ ವ್ಯಕ್ತಿಗಳಿಗೆ ಬಡ್ತಿಯಲ್ಲಿ ಮೀಸಲಾತಿ ಒದಗಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಿರುತ್ತದೆ.

ರಾಜ್ಯ ಸರ್ಕಾರದಲ್ಲಿ ನೇಮಕಾತಿ ಹಾಗೂ ಬಡ್ತಿ ಮೀಸಲಾತಿಗಾಗಿ ಹಾಲಿ ರಿಕ್ತ ಸ್ಥಾನ ಆಧಾರಿತ ವ್ಯವಸ್ಥೆಯನ್ನು ಪಾಲಿಸಲಾಗುತ್ತಿದೆ. ಕೇಂದ್ರ ಸರ್ಕಾರವು ಹುದ್ದೆ ಆಧಾರಿತ ವ್ಯವಸ್ಥೆಯನ್ನು ಪಾಲಿಸುತ್ತಿದೆ. ಭಾರತ ಸಂವಿಧಾನದ ಅನುಚ್ಛೇದ 16(4ಎ)ರನ್ವಯ ನೇರ ಮೀಸಲಾತಿಯಡಿ ಬರುವ (Vertical Reservation) ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಅಭ್ಯರ್ಥಿಗಳಿಗೆ ಮಾತ್ರ ಮುಂಬಡ್ತಿಯಲ್ಲಿ ಮೀಸಲಾತಿ ನೀಡಲು ಅವಕಾಶ ಕಲ್ಪಿಸಲಾಗಿದ್ದು, ಸಮತಳ ಮೀಸಲಾತಿಯಡಿ ಬರುವ ಯಾವುದೇ ಪ್ರವರ್ಗಕ್ಕೆ ಬಡ್ತಿಯಲ್ಲಿ ಮೀಸಲಾತಿ ಕಲ್ಪಿಸಲು ಚಾಲ್ತಿಯಲ್ಲಿರುವ ರೂಪುರೇಷೆಗಳನ್ವಯ ಅವಕಾಶವಿರುವುದಿಲ್ಲ.

ನ್ಯಾಷನಲ್ ಫೆಡರೇಷನ್ ಆಫ್ ದಿ ಬ್ಲೈಂಡ್ ಸಂಸ್ಥೆಯು ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ ಮನವಿಯ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಮತ್ತು ಇತರ ಕೆಲವು ರಾಜ್ಯ ಸರ್ಕಾರಗಳು ಅನುಸರಿಸಿದಂತೆ ಸಮತಳದ ಮೀಸಲಾತಿಯನ್ನು

ಜಾರಿಗೊಳಿಸಲು ಅವಶ್ಯ ಬದಲಾವಣೆಗಳನ್ನು ಮಾಡುವ ಬಗ್ಗೆ ಹಾಗೂ ಅಂಗವಿಕಲರಿಗೆ ಬಡ್ತಿಯಲ್ಲಿ ಮೀಸಲಾತಿ ಒದಗಿಸುವ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಲು ಸರ್ಕಾರದ ನಿವೃತ್ತ ಕಾರ್ಯದರ್ಶಿಯವರ ನೇತೃತ್ವದಲ್ಲಿ ಸಮಿತಿ ರಚಿಸಲು ತೀರ್ಮಾನಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಸಿಆಸುಇ 6 ಸೆಸೇನಿ 2017, ಬೆಂಗಳೂರು, ದಿನಾಂಕ: 05/01/2018**

ಹುದ್ದೆ ಆಧಾರಿತ ಮೀಸಲಾತಿ ನೀತಿ ಅನುಸರಿಸುವುದು ರಾಜ್ಯ ಸರ್ಕಾರದ ನೀತಿ–ನಿರ್ಣಯದಲ್ಲಿ ಒಂದು ಪ್ರಮುಖ ಬದಲಾವಣೆ ಆಗುವುದರಿಂದ ಇದರ ಸಾಧಕ–ಬಾಧಕಗಳನ್ನು ಪರಿಶೀಲಿಸಿ ವರದಿ ನೀಡಲು ಹಾಗೂ ಸಮತಳ ಮೀಸಲಾತಿಯಡಿ ಬರುವ ಅಂಗವಿಕಲರಿಗೆ ಬಡ್ತಿಯಲ್ಲಿ ಮೀಸಲಾತಿ ಕಲ್ಪಿಸುವ ಸಾಧ್ಯತೆ ಬಗ್ಗೆ ಪರಿಶೀಲಿಸಲು ಶ್ರೀ.ಹೆಚ್.ಶಶಿಧರ್ ಭಾ.ಆ.ಸೇ.,(ನಿ) ಸರ್ಕಾರದ ಕಾರ್ಯದರ್ಶಿ ಇವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಲಾಗಿದೆ.

ಷರತ್ತು ಮತ್ತು ನಿಬಂಧನೆಗಳನ್ನು ಪ್ರತ್ಯೇಕ ಆದೇಶದಲ್ಲಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಗಾಯತ್ರಿ ಎಂ.ಆರ್**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು–1)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: ೧೦೦